All India Radio: Bangalore

Regional Bulletin In Kannada

24.07.2025 6.40p.m.

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

<><><><>

ಮುಖ್ಯಾಂಶಗಳು

- ಚಿನ್ನಸ್ವಾಮಿ ಕಾಲ್ತುಳಿತ ಪ್ರಕರಣ : ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲು ಸಂಪುಟ ಸಭೆ ಒಪ್ಪಿಗೆ

- ರಾಜ್ಯದ ಪ್ರತಿಯೊಂದು ಪೊಲೀಸ್ ಠಾಣೆಗೆ ಡ್ರೋನ್ ವ್ಯವಸ್ಥೆ ಕಲ್ಪಿಸಲು ಸರ್ಕಾರ ನಿರ್ಧಾರ

- ಮಹದಾಯಿ ಯೋಜನೆ ಕಾಮಗಾರಿ ಶೀಘ್ರವೇ ಆರಂಭ : ಗೋವಾ ಸರ್ಕಾರಕ್ಕೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸವಾಲು

- ಅರಣ್ಯವಾಸಿಗಳು ಬುಡಕಟ್ಟು ಜನಾಂಗದವರಿಗೆ ಕಾಡಿನಲ್ಲಿ ಜಾನುವಾರು ಮೇಯಿಸಲು ಅವಕಾಶ - ಸಚಿವ ಈಶ್ವರ್ ಬಿ. ಖಂಡ್ರೆ

- ಸ್ಮಾರ್ಟ್ ಮೀಟರ್ ಖರೀದಿಯಲ್ಲಿ ಅಕ್ರಮ ಆರೋಪ : ಇಂಧನ ಸಚಿವ ರಾಜೀನಾಮೆಗೆ ಬಿಜೆಪಿ ಆಗ್ರಹ

<><><><>

ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಆರ್‌ಸಿಬಿ ವಿರುದ್ಧ ಕ್ರಿಮಿನಲ್ ಕೇಸ್ ದಾಖಲಿಸಲು ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ಸೂಚಿಸಲಾಗಿದೆ. ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕಾನೂನು ಸಚಿವ ಎಚ್.ಕೆ. ಪಾಟೀಲ್, ಸಂಬಂಧಿಸಿದ ಸರ್ಕಾರಿ ಅಧಿಕಾರಿಗಳ ವಿರುದ್ಧ ಇಲಾಖಾ ತನಿಖೆಗೆ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಧ್ವನಿ : ಎಚ್.ಕೆ. ಪಾಟೀಲ್

ಇದೇ ವೇಳೆ ಬಾಲ್ಯವಿವಾಹ ನಿಷೇಧ ತಿದ್ದುಪಡಿ ಕಾಯ್ದೆ - ೨೦೨೫ಕ್ಕೆ ಅನುಮೋದನೆ ನೀಡಿದ್ದು, ಬಾಲ್ಯವಿವಾಹ ತಡೆಯಲು ನಿಶ್ಚಿತಾರ್ಥ ಮಾತುಕತೆಯಲ್ಲಿ ಭಾಗಿಯಾದವರ ವಿರುದ್ಧವೂ ಕ್ರಮ ಕೈಗೊಳ್ಳುವುವ ಬಗ್ಗೆಯೂ ಕಾಯ್ದೆಯಲ್ಲಿ ಉಲ್ಲೇಖಿಸಲಾಗಿದೆ.

ಬಾಲ್ಯ ವಿವಾಹಕ್ಕೆ ಕುಟುಂಬಸ್ಥರು ಒಪ್ಪಿದರೆ ಹಾಗೂ ಯಾರೇ ಒತ್ತಡ ಹಾಕಿದರೂ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ೧೦ ಕೋಟಿ ರೂಪಾಯಿ ವೆಚ್ಚದ ಸ್ಪೇಸ್‌ಟೆಕ್ ಕೇಂದ್ರ ಸ್ಥಾಪನೆಗೆ ಅನುಮೋದನೆ ನೀಡಲಾಗಿದೆ. ಜೊತೆಗೆ ಎಲ್ಲ ಎತ್ತರದ ಕಟ್ಟಡಗಳಿಗೆ ಶೇಕಡ ೧ ರಷ್ಟು ಸೆಸ್ ವಿಧಿಸಲು ನಿರ್ಧರಿಸಲಾಗಿದೆ. ರಾಯಚೂರಿನಲ್ಲಿ ೫೦ ಕೋಟಿ ವೆಚ್ಚದಲ್ಲಿ ಕಿದ್ವಾಯಿ ಕ್ಯಾನ್ಸರ್ ಚಿಕಿತ್ಸಾ ಘಟಕ ಸ್ಥಾಪನೆಗೆ ಒಪ್ಪಿಗೆ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಕರ್ನಾಟಕದ ಪ್ರತಿಯೊಂದು ಪೊಲೀಸ್ ಠಾಣೆಯನ್ನು ಡ್ರೋನ್‌ಗಳಿಂದ ಸಜ್ಜುಗೊಳಿಸುವುದು ಸರ್ಕಾರದ ಗುರಿಯಾಗಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ನಡೆದ ಕಾರ್ಯಕ್ರಮದಲ್ಲಿ, ಗೃಹ ಸಚಿವ ಡಾ. ಜಿ. ಪರಮೇಶ್ವರ್ ಕಲಬುರಗಿ ಜಿಲ್ಲೆಯ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ ಅವರಿಗೆ ಸುಧಾರಿತ ಕಣ್ಗಾವಲು ಡ್ರೋನ್‌ಗಳಾದ - ನಿಂಬಲ್-ಐ ಮತ್ತು ಎನ್‌ಎಸ್೦೧ - ಹಸ್ತಾಂತರಿಸಿದರು. ರಾಜ್ಯದಲ್ಲಿ ವಿನ್ಯಾಸಗೊಳಿಸಲಾದ ಹಾಗೂ ತಯಾರಿಸಲಾದ ಡ್ರೋನ್‌ಗಳು ಎಐ-ಚಾಲಿತ ಕಣ್ಗಾವಲು ವೈಶಿಷ್ಟ್ಯಗಳೊಂದಿಗೆ ಸಜ್ಜುಗೊಂಡಿವೆ ಎಂದು ಹೇಳಿದ್ದಾರೆ.

ಕಾರ್ಯಕ್ರಮದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಮಾತನಾಡಿ, ಕಲಬುರಗಿ ಜಿಲ್ಲೆಯಲ್ಲಿ ೫೦೦ ಯುವಕರಿಗೆ ಡಿಜಿಸಿಎ ಪ್ರಮಾಣೀಕೃತ ಡ್ರೋನ್ ಕಾರ್ಯಾಚರಣೆಗಳಲ್ಲಿ ತರಬೇತಿ ನೀಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಮಹದಾಯಿ ಯೋಜನೆಗೆ ಕೇಂದ್ರ ಅರಣ್ಯ ಇಲಾಖೆ ಅನುಮತಿ ನೀಡುವುದಿಲ್ಲ ಎಂಬ ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಹೇಳಿಕೆ ಖಂಡನೀಯ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಸುಪ್ರೀಂಕೋರ್ಟ್‌ನಲ್ಲಿ ಸಲ್ಲಿಸಿರುವ ಅರ್ಜಿ ಹಿಂಪಡೆದು ಕೂಡಲೇ ಮಹದಾಯಿ ಯೋಜನೆ ಕಾಮಗಾರಿ ಆರಂಭಿಸುವುದಾಗಿ ಘೋಷಿಸಿದ್ದಾರೆ. ಸಾಧ್ಯವಾದರೆ ಗೋವಾ ಸರ್ಕಾರ ಅದನ್ನು ತಡೆಯಲಿ ಎಂದು ಸವಾಲು ಹಾಕಿದ್ದಾರೆ.

ರಾಜ್ಯದ ಗೌರವ ಉಳಿಸಲು ಎಲ್ಲ ಸಂಸದರು ಒಟ್ಟಾಗಿ ಹೋರಾಡುವಂತೆ ಕರೆ ನೀಡಿದ್ದಾರೆ.

<><><>

ಅರಣ್ಯ ಹಕ್ಕು ಕಾಯಿದೆ -೨೦೦೬ ಅಡಿಯಲ್ಲಿ ಅರಣ್ಯವಾಸಿಗಳು ಮತ್ತು ಬುಡಕಟ್ಟು ಜನಾಂಗದವರಿಗೆ ಕಾಡಿನಲ್ಲಿ ತಮ್ಮ ಜಾನುವಾರುಗಳನ್ನು ಮೇಯಿಸಲು ಅವಕಾಶವಿದೆ ಎಂದು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸ್ಪಷ್ಟಪಡಿಸಿದ್ದಾರೆ. ನೆರೆರಾಜ್ಯದಿಂದ ಸಾವಿರಾರು ಸಂಖ್ಯೆಯಲ್ಲಿ ದನಕರು ತಂದು ಮೇಯಿಸುವುದಕ್ಕೆ ಮಾತ್ರ ಕಡಿವಾಣ ಹಾಕಲಾಗುವುದು ಎಂದು ತಿಳಿಸಿದ್ದಾರೆ.

ಮಲೆ ಮಹದೇಶ್ವರ ಬೆಟ್ಟ ವನ್ಯಜೀವಿಧಾಮದ ವ್ಯಾಪ್ತಿಯಲ್ಲಿ ಸುಮಾರು ೩೩ ಸಾವಿರ ದನಕರುಗಳಿವೆ ಎಂದು ಪಶುಸಂಗೋಪನಾ ಇಲಾಖೆ ಅಂಕಿ ಅಂಶ ತಿಳಿಸಿದೆ. ಇಷ್ಟೊಂದು ದನಕರುಗಳು ಕಾಡಿಗೆ ಹೋಗುವುದರಿಂದ ವನ್ಯಜೀವಿಗಳಾದ ಆನೆ, ಕಾಡೆಮ್ಮೆ, ಕಾಡುಕೋಣ, ಜಿಂಕೆ, ಕಡವೆ ಇತ್ಯಾದಿಗಳಿಗೆ ಮೇವಿನ ಕೊರತೆ ಹಾಗೂ ನೀರಿನ ಕೊರತೆ ಎದುರಾಗಲಿದೆ. ಸಾಂಕ್ರಾಮಿಕ ಕಾಯಿಲೆಗಳು ವನ್ಯಜೀವಿಗಳಿಗೂ ಹಬ್ಬುವ ಅಪಾಯ ಇದೆ ಎಂದು ತಿಳಿಸಿದ್ದಾರೆ.

<><><><>

ದಕ್ಷಿಣಕನ್ನಡ ಜಿಲ್ಲೆಯಲ್ಲಿ ಜನಸಾಮಾನ್ಯರಿಗೆ ಅನುಕೂಲವಾಗುವಂತೆ ಸ್ಯಾಂಡ್‌ಬಜಾರ್ ಆಪ್ ಮಾದರಿಯಲ್ಲಿಯೇ ಕೆಂಪು ಕಲ್ಲು ಖರೀದಿಗೆ ಆಪ್ ಸಿಸ್ಟಂ ಜಾರಿಗೆ ತರಲಾಗುವುದು ಎಂದು ವಿಧಾನಸಭಾ ಅಧ್ಯಕ್ಷ ಯು.ಟಿ.ಖಾದರ್ ಸ್ಪಷ್ಟಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಹಿಂದೆ ಜಾರಿಗೆ ತಂದ ಸ್ಯಾಂಡ್ ಬಜಾರ್ ಆಪ್‌ನಿಂದಾಗಿ ಕರಾವಳಿಯಲ್ಲಿ ಜನಸಾಮಾನ್ಯರಿಗೆ ಕೈಗೆಟುಕುವ ದರದಲ್ಲಿ ಮರಳು ಲಭ್ಯವಾಗುತ್ತಿತ್ತು. ಅದೇ ಮಾದರಿಯಲ್ಲಿ ಕೆಂಪು ಕಲ್ಲು ಕೂಡ ಲಭ್ಯವಾಗುವಂತೆ ವ್ಯವಸ್ಥೆ ಮಾಡಲಾಗುವುದು ಎಂದು ತಿಳಿಸಿದ್ದಾರೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿನ ಕೆಂಪು ಕಲ್ಲು ಸಮಸ್ಯೆ ಶೀಘ್ರವೇ ಬಗೆಹರಿಯಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ : ಯು.ಟಿ. ಖಾದರ್

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಜಾತಿಗಳ ನಡುವೆ ಕಂದಕ ತರಲು ಗಣತಿ ಕಾರ್ಯ ನಡೆಸುತ್ತಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊರೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯ ಸರ್ಕಾರ ಕಾಟಾಚಾರಕ್ಕೆ ಜಾತಿ ಒಳಮೀಸಲು ಸಮೀಕ್ಷೆ ಮಾಡಿದೆ ಎಂದು ದೂರಿದ್ದಾರೆ.

ಸ್ಮಾರ್ಟ್ ಮೀಟರ್ ಖರೀದಿಯಲ್ಲಿ ಕಾಂಗ್ರೆಸ್ ಲೂಟಿ ಮಾಡುತ್ತಿದ್ದು, ಜನರಿಗೆ ನ್ಯಾಯ ಸಿಗಲು ಬಿಜೆಪಿ ಹೋರಾಟ ನಡೆಸಲಿದೆ ಎಂದು ತಿಳಿಸಿದ್ದಾರೆ.

ಸ್ಮಾರ್ಟ್ ಮೀಟರ್ ಹಗರಣದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಡಲೇ ಇಂಧನ ಸಚಿವ ಕೆ.ಜೆ.ಜಾರ್ಜ್ ಅವರನ್ನು ವಜಾಗೊಳಿಸಬೇಕು ಎಂದು ಮಾಜಿ ಉಪಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವತ್ಥನಾರಾಯಣ್ ಒತ್ತಾಯಿಸಿದ್ದಾರೆ.

<><><><>

ಉನ್ನತ ಶಿಕ್ಷಣದ ವಿದ್ಯಾರ್ಥಿಗಳು ಜಾಗತಿಕ ಭಾಷೆಗಳ ಕಲಿಕೆಯ ಮೂಲಕ ಉತ್ತಮ ಉದ್ಯೋಗ ಅವಕಾಶಗಳನ್ನು ಗಳಿಸಿಕೊಳ್ಳಬಹುದೆಂದು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಉಪಾಧ್ಯಕ್ಷ ಪ್ರೊ. ಎಸ್.ಆರ್. ನಿರಂಜನ ಪ್ರತಿಪಾದಿಸಿದ್ದಾರೆ.

ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ನೂತನ ಶೈಕ್ಷಣಿಕ ವಿಭಾಗದಲ್ಲಿ ಜಾಗತಿಕ ಭಾಷೆಗಳ ಕೇಂದ್ರದ ವತಿಯಿಂದ ಏರ್ಪಡಿಸಲಾಗಿದ್ದ ವಿಚಾರಸಂಕಿರಣ ಉದ್ಘಾಟಿಸಿ ಮಾತನಾಡಿದ ಅವರು, ಭಾಷಾ ಕೌಶಲ್ಯ ಅತ್ಯಂತ ಪರಿಣಾಮಕಾರಿ ಸಂವಹನ ಸಾಧನವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

‘ಜಾಗತಿಕ ಭಾಷೆಗಳ ಕಲಿಕೆಗೆ ಅನ್ವೇಷಣಾತ್ಮಕ ಬೋಧನಾ ವಿಧಾನ" ಎಂಬ ವಿಷಯದ ಕುರಿತು ವಿವಿಧ ಪರಿಣಿತರು ಉಪನ್ಯಾಸ ನೀಡಿದರು.

<><><><>

ಬೆಂಗಳೂರು ಬೆಳಗಾವಿ ಮಧ್ಯ ವಂದೇ ಭಾರತ್ ರೈಲು ಸಂಚಾರಕ್ಕೆ ಅನುಮತಿ ನೀಡಲಾಗಿದ್ದು, ಹೊಸ ರೈಲು ಬೋಗಿಗಳಿಗೆ ಬೇಡಿಕೆ ಸಲ್ಲಿಸಲಾಗಿದೆ. ಅವುಗಳ ಲಭ್ಯತೆಯ ಆಧಾರದ ಮೇಲೆ ಆದಷ್ಟು ಶೀಘ್ರ ವಂದೇ ಭಾರತ ರೈಲು ಪ್ರಾರಂಭಿಸುವುದಾಗಿ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ ಭರವಸೆ ನೀಡಿದ್ದಾಗಿ ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ತಿಳಿಸಿದ್ದಾರೆ.

ಪತ್ರಿಕಾ ಪ್ರಕಟಣೆಯಲ್ಲಿ ಈ ವಿಷಯ ತಿಳಿಸಿರುವ ಅವರು, ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ, ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಹ್ಲಾದ್ ಜೋಶಿ ಜೊತೆಗೂಡಿ ಸಚಿವ ಅಶ್ವಿನಿ ವೈಷ್ಣವ್ ಅವರೊಂದಿಗೆ ಇಂದು ನವದೆಹಲಿಯಲ್ಲಿ ಚರ್ಚಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಬೆಳಗಾವಿ ಮಿರಜ್ ವಿಶೇಷ ರೈಲನ್ನು ಕೇವಲ ಒಂದು ತಿಂಗಳಲ್ಲಿ ಪ್ಯಾಸೇಂಜರ್ ರೈಲಾಗಿ ಪರಿವರ್ತಿಸಿ ಆದೇಶ ಹೊರಡಿಸಲಾಗುವುದು ಎಂದು ಭರವಸೆ ನೀಡಿರುವುದಾಗಿ ತಿಳಿಸಿದ್ದಾರೆ.

<><><><>

ಕಂದಾಯ ಇಲಾಖೆಯ ಸೇವೆಗಳು ಸಮರ್ಪಕವಾಗಿ ಮನೆ ಬಾಗಿಲಿಗೆ ದೊರೆಯುವಂತಾಗಬೇಕು ಎಂಬ ಉದ್ದೇಶದಿಂದ ಪೌತಿ ಖಾತೆ  ಆಂದೋಲನ ಹಾಗೂ ಹಕ್ಕು ಪತ್ರವಿತರಣ ಕಾರ್ಯಕ್ರಮ ರೂಪಿಸಲಾಗಿದೆ ಎಂದು ಶಾಸಕ ದರ್ಶನ್ ಪುಟ್ಟಣ್ಣಯ್ಯ ತಿಳಿಸಿದ್ದಾರೆ.

ಮಂಡ್ಯ ಜಿಲ್ಲೆಯ ಪಾಂಡವಪುರ ತಾಲ್ಲೂಕಿನ ರಾಗಿಮುದ್ದನಹಳ್ಳಿಯಲ್ಲಿರುವ ಗುಮ್ಮನಹಳ್ಳಿ ಗ್ರಾಮ ಪಂಚಾಯತ್ ಕಚೇರಿ ಆವರಣದಲ್ಲಿ ಆಯೋಜಿಸಿದ್ದ ಪೌತಿ ಖಾತೆ ಆಂದೋಲನ ಹಾಗೂ ನಿವೇಶನಗಳ ಹಕ್ಕು ಪತ್ರ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರಿ ಕಾರ್ಯಕ್ರಮಗಳಿಗೆ ಜನ ಸ್ವಂಧನೆ ಬಹುಮುಖ್ಯ. ಕಂದಾಯ ಇಲಾಖೆಯ ಅಗತ್ಯ  ಕೆಲಸ ಕಾರ್ಯಗಳು ನಿಗದಿತ ಸಮಯಕ್ಕೆ ಆಗಬೇಕಾದರೆ ಸೂಕ್ರ ದಾಖಲೆಗಳನ್ನು ನೀಡಿ ಸಹಕರಿಸಬೇಕು ಎಂದು ಮನವಿ ಮಾಡಿದ್ದಾರೆ.

<><><><>

ಜಾನುವಾರುಗಳ ಮಾಲೀಕರು ತಮ್ಮ ಜಾನುವಾರುಗಳನ್ನು ಬಿಡಾಡಿಯಾಗಿ ರಸ್ತೆಗಳಲ್ಲಿ ಬಿಡುತ್ತಿರುವುದರಿಂದ ರಸ್ತೆ ಸಂಚಾರಕ್ಕೆ ತೊಂದರೆಯಾಗುತ್ತಿದೆ ಎಂದು ವಿಜಯಪುರ ಮಹಾನಗರ ಪಾಲಿಕೆಯ ಆಯುಕ್ತ ವಿಜಯಕುಮಾರ ಮೆಕ್ಕಳಕಿ ತಿಳಿಸಿದ್ದಾರೆ.

<><><><>